ಕರ್ನಾಟಕ ಸರ್ಕಾರ

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಗ್ರಾಮ ಪಂಚಾಯತ್ ಕಾರ್ಯಾಲಯ ಕಾಲ್ತೋಡು

ಬೈಂದೂರು ತಾಲೂಕು, ಉಡುಪಿ ಜಿಲ್ಲೆ
ದೂರವಾಣಿ ಸಂ: 08254 254102, ಇ-ಮೈಲ್ kaltodu09@gmail.com

ಪತ್ರ ಸಂ.ಕಾ.ಗ್ರಾ.ಪಂ: 09/2020-21

ದಿನಾಂಕ: 11/05/2020

ಇಗೆ,

ಶ್ರೀ ಬಿ. ಎಸ್. ಯಡಿಯೂರಪ್ಪ
ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು

ಮಾನ್ಯರೇ,

ವಿಷಯ: ಗ್ರಾಮ ಪಂಚಾಯತ್‌ಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ.

ಇಡೀ ದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್ – 19ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳಾಗಿವೆ. ಇದರ ಪರಿಣಾಮ, ಕರ್ನಾಟಕದಲ್ಲಿ, ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮ ಪಂಚಾಯತ್ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್-19ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇ ಸರಿ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್‍ಯಾವುದೋ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ.

ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ, ಸರ್ಕಾರದ ರಥ ಮುನ್ನಡೆಸುವಲ್ಲಿ ಇಬ್ಬರ ಪಾತ್ರವೂ ಬಹಳ ಪ್ರಮುಖವಾದುದು. ಗ್ರಾಮ ಪಂಚಾಯತ್ ಒಂದು ಸ್ಥಳೀಯ ಸ್ವಯಂ ಸರ್ಕಾರ. ಹೀಗಾಗಿಯೇ ಇಡೀ ರಾಜ್ಯಾದ್ಯಂತ ಕೋವಿಡ್-19ರ ಪರಿಸ್ಥಿತಿ ಘೋಷಣೆಯು ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ, ಸ್ವಯಂಸೇವಾ ಸಂಸ್ಥೆಗಳ, ಸ್ವಯಂಸೇವಕರ ಸಂಯೋಜನೆಯಲ್ಲಿ ಟಾಸ್ಕ್ ಪಡೆ (ಕಾರ್ಯಪಡೆ) ರಚಿಸಿ ಇಡೀ ಪಂಚಾಯತ್‌ನ ವಿಕೋಪ ನಿರ್ವಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು. ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ್ ಅಭಿವೃದ್ಧಿಯಲ್ಲಿ ನಮ್ಮ ಪಾತ್ರ-ಜವಾಬ್ದಾರಿಗಳ ಮಹತ್ವವನ್ನು ಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನು ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಷವಾಗಿ ಗಮನಿಸಿದ್ದೇವೆ.

ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ, ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯನಿರ್ವಹಿಸುತ್ತೇವೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರಿಯುತ್ತಿರುವ ಈ ಸವಾಲಿನ ಸಮಯದಲ್ಲಿ, ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಅಸಮಂಜಸವಾದುದು. ತಮ್ಮ ಸರ್ಕಾರದ ಈ ಆಲೋಚನೆ, ನಿರ್ಧಾರವನ್ನು ತಕ್ಷಣವೇ ಕೈಬಿಟ್ಟು, ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೇ ಮತ್ತೊಂದು ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರೆಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ, ನಮ್ಮ ಪಂಚಾಯತ್‌ನ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತಿದ್ದೇವೆ. ಇದೇ ಪಂಚಾಯತ್‌ನ ಜನರಿಂದ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ, ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ.

ಇತಿ,

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು
ಕಾಲ್ತೋಡು ಗ್ರಾಮ ಪಂಚಾಯತ್, ಬೈಂದೂರು ತಾಲೂಕು, ಉಡುಪಿ ಜಿಲ್ಲೆ

ಅಧ್ಯಕ್ಷರು
ಗ್ರಾಮ ಪಂಚಾಯತ್ ಕಾಲ್ತೋಡು
ಕುಂದಾಪುರ ತಾಲೂಕು

ಯಥಾ ಪ್ರತಿ:

1) ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ

2) ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ

3) ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ

ಕಾಲ್ತೋಡು ಗ್ರಾಮ ಪಂಚಾಯತ್, ಬೈಂದೂರು ತಾಲೂಕು, ಉಡುಪಿ ಜಿಲ್ಲೆ

| ಕ್ರ.ಸಂ | ಹೆಸರು | ಪದನಾಮ | ಸಹಿ |
|---|---|---|---|
| 1 | ಶ್ರೀ ಬಿ. ಅಣ್ಣಪ್ಪ ಶೆಟ್ಟಿ | ಅಧ್ಯಕ್ಷರು | [signature] |
| 2 | ಶ್ರೀ ರಾಜು ಪೂಜಾರಿ | ಉಪಾಧ್ಯಕ್ಷರು | [signature] |
| 3 | ಶ್ರೀ ಕೆ. ಚಂದ್ರಶೇಖರ ಶೆಟ್ಟಿ | ಸದಸ್ಯರು | [signature] |
| 4 | ಶ್ರೀಮತಿ ಗುಲಾಬಿ ಪೂಜಾರ್ತಿ | ಸದಸ್ಯರು | [signature] |
| 5 | ಶ್ರೀಮತಿ ಲಲಿತಾ ಶೆಟ್ಟಿ | ಸದಸ್ಯರು | [signature] |
| 6 | ಶ್ರೀಮತಿ ಜಯಶೀಲಾ | ಸದಸ್ಯರು | [signature] |
| 7 | ಶ್ರೀಮತಿ ಚಂದು ಕುಲಾಲ್ತಿ | ಸದಸ್ಯರು | [signature] |
| 8 | ಶ್ರೀ ಮಾದಯ್ಯ ಶೆಟ್ಟಿ | ಸದಸ್ಯರು | [signature] |
| 9 | ಶ್ರೀ ಗಣೇಶ ಶೆಟ್ಟಿ | ಸದಸ್ಯರು | [signature] |
| 10 | ಶ್ರೀ ಮಹೇಂದ್ರ ಆಚಾರಿ | ಸದಸ್ಯರು | [signature] |
| 11 | ಶ್ರೀಮತಿ ವಿನೋದ | ಸದಸ್ಯರು | [signature] |
| 12 | ಶ್ರೀಮತಿ ಬೇಬಿ ಮೊಗೇರ | ಸದಸ್ಯರು | [signature] |
| 13 | ಶ್ರೀಮತಿ ಸುಜಾತ ಪೂಜಾರ್ತಿ | ಸದಸ್ಯರು | [signature] |